**2 ನೇ ಹೆಚ್ಚುವರಿ ನ್ಯಾಯಿಕ ದಂಡಾಧಿಕಾರಿಗಳು, ಗೋಕಾಕ ಇವರ ನ್ಯಾಯಾಲಯ**
**ಸಾಃಗೋಕಾಕ**

**ಸಿ.ಸಿ ನಂ. 706/2012**

ದಿಃ **07-08-2025** ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಭೋಧಿಸಲಾಯಿತು.

ಚಾ.ಸಾ-2 ಪ್ರಾ.ಸಾ-1

| | | |
|---|---|---|
| ಹೆಸರು | : | ವಾಮನ ಗುಂಡನಾಜಿ ಕಲಾಲ |
| ತಂದೆ ಹೆಸರು | : | ಗುಂಡನಾಜಿ ಕಲಾಲ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಗೌಂಡಿ ಕೆಲಸ |
| ವಾಸಸ್ಥಳ | : | ಗೋಕಾಕ |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಚಾಸಾ-3 ರವರ ಪರಿಚಯ ಇರುವುದಿಲ್ಲ. ಆರೋಪಿ ಪರಿಚಯವಿಲ್ಲ.

ಪೊಲೀಸರು ನಮ್ಮನ್ನು ಪಂಚನಾಮೆಗೆ ಕರೆದಿಲ್ಲ. ನಮ್ಮ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ಸಾಕ್ಷಿಗೆ ಘಟನಾ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ನೋಡಿ ಗುರುತಿಸಿದ್ದು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿದಾರರನ್ನಾಗಿ ಪರಿಗಣಿಸಲು ಮಾನ್ಯ ಸ.ಸ.ಅ. ಅವರು ಅನುಮತಿ ಕೋರಿದ್ದು, ಪರಿಶೀಲಿಸಿ ನೋಡಿ ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ ಸ.ಸ.ಅ. ಅವರಿಂದಃ</u>**

ದಿಃ 28-01-2012 ರಂದು ಮಧ್ಯಾಹ್ನ 3-00 ರಿಂದ 04-00 ಗಂಟೆವರೆಗೆ ಪೊಲೀಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆ ಜರುಗಿಸಿ ಒಂದು ಕಪ್ಪು ಬಣ್ಣದ ರಬ್ಬರ ಟ್ಯೂಬನಲ್ಲಿ ಇದ್ದ ಅಂದಾಜು 20 ಲೀಟರ ಕಳ್ಳಭಟ್ಟಿ ಸರಾಯಿಯನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದರ ಪೈಕಿ 180 ಎಂ.ಎಲ. ಕಳ್ಳಭಟ್ಟಿ ಸರಾಯಿಯನ್ನು ರಸಾಯನಿಕ ಪರೀಕ್ಷೆಗೆ ಗಾಗಿ ಸ್ಯಾಂಪಲ ಎಂದು ಬೇರ್ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಆರೋಪಿ ಪರ ವಕೀಲರು ಹಾಜರಿದ್ದು, ಪಾಟೀ ಸವಾಲು ಇಲ್ಲಾ ಎಂದು ತಿಳಿಸಿರುತ್ತಾರೆ.

**<u>ಮರು ವಿಚಾರಣೆಃ</u>** --ಇಲ್ಲಾ--

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

**(ಶ್ರೀ. ಅಭಿನಯ)**
**C/c 2ನೇ ಹೆ.ದಿ.&ನ್ಯಾ.ದಂ.,ಗೋಕಾಕ.**